# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1471(1625) |
| ಸದಸ್ಯರ ಹೆಸರು | : ಶ್ರೀ ಪುಟ್ಟಣ್ಣ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 18-03-2026. |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಯಾವ- ಯಾವ ವಿಧದ ಎಷ್ಟು ಶಾಲಾ ಕಾಲೇಜುಗಳು ನಡೆಯುತ್ತಿವೆ; (ಸಂಪೂರ್ಣ ವಿವರ ನೀಡುವುದು).</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಈ ಕೆಳಕಂಡಂತೆ ಶಾಲಾ/ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿವೆ.
<table>
<tr><th>ಕ್ರ. ಸಂ</th><th>ಶಾಲೆ/ಕಾಲೇಜುವಿಧ</th><th>ಸಂಖ್ಯೆ</th></tr>
<tr><td>1</td><td>ಮೊರಾರ್ಜಿದೇಸಾಯಿವಸತಿ ಶಾಲೆಗಳು</td><td>140</td></tr>
<tr><td>2</td><td>ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು</td><td>04</td></tr>
<tr><td>3</td><td>ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳು</td><td>29</td></tr>
<tr><td>4</td><td>ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳು</td><td>13</td></tr>
<tr><td>5</td><td>ಮೌಲಾನ ಆಜಾದ್ ಮಾದರಿ ಶಾಲೆಗಳು</td><td>300</td></tr>
</table></td></tr>
<tr><td>ಆ)</td><td>ಹಾಲಿ ನಡೆಯುತ್ತಿರುವ ಶಾಲಾ-ಕಾಲೇಜುಗಳನ್ನು ಹೊರತುಪಡಿಸಿ, ಎಷ್ಟು ಹೊಸ ಕಾಲೇಜುಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ; (ವಿವರ ನೀಡುವುದು)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಾಲಾ/ಕಾಲೇಜುಗಳ ಜೊತೆಗೆ ಪ್ರಸಕ್ತ ಸಾಲಿನಲ್ಲಿ ಹೊಸ 50 ಮೊರಾರ್ಜಿದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲು ಮತ್ತು ಹಾಲಿ ಇರುವ ವಸತಿ ಶಾಲೆಗಳ ಪೈಕಿ 25 ಶಾಲೆಗಳಲ್ಲಿ ಪದವಿ ಪೂರ್ವ ತರಗತಿಯವರೆಗೆ ಉನ್ನತೀಕರಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.</td></tr>
<tr><td>ಇ)</td><td>ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಬಡ್ತಿ ನೀಡಲು ಅನುಕೂಲವಾಗುವ ಹೊಸ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿತವಾಗಿದೆಯೇ; ರಚಿಸದಿದ್ದರೆ, ಯಾವ ಕಾಲಮಿತಿಯಲ್ಲಿ ರಚಿಸಲಾಗುವುದು; (ವಿವರ ನೀಡುವುದು).</td><td>ಪ್ರಸ್ತುತ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 2011 ರ ವೃಂದ ಮತ್ತು ನೇಮಕಾತಿ ನಿಯಮಗಳು ಜಾರಿಯಲ್ಲಿದ್ದು, ಸದರಿ ವೃಂದ ಮತ್ತು ನೇಮಕಾತಿಗಳ ನಿಯಮಗಳ ಸಮಗ್ರ ಪರಿಷ್ಕರಣೆ ಕುರಿತಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದು ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನಾ ಇಲಾಖೆಯಿಂದ ಪರಿಶೋಧಿಸಿ, ಸದರಿ ನಿಯಮಗಳನ್ನು ವೃಂದ ಪರಿಶೀಲನಾ ಸಮಿತಿಯ ಮುಂದೆ ಮಂಡಿಸಲು ಕ್ರಮವಹಿಸಲಾಗುತ್ತಿದೆ.</td></tr>
<tr><td>ಈ)</td><td>2025-26ನೇ ಸಾಲಿನಲ್ಲಿ ಸದರಿ ಶಾಲಾ ಕಾಲೇಜುಗಳಿಗೆ ವೇತನ, ಕಟ್ಟಡ ನಿರ್ಮಾಣ ಇನ್ನಿತರ ಕೆಲಸಗಳಿಗೆ ಬಿಡುಗಡೆ ಮಾಡಿರುವ ಹಣವೆಷ್ಟು? (ವಿವರನೀಡುವುದು)</td><td>2025-26 ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆ-ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕ/ಉಪನ್ಯಾಸಕರ ಗೌರವಧನ ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ವೇತನ ಪಾವತಿಸಲು ಒಟ್ಟು ರೂ.7580.49 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.</td></tr>
</table>

......2

| | | |
|---|---|---|
| | | 2025-26ನೇ ಸಾಲಿನಲ್ಲಿ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕ/ಉಪನ್ಯಾಸಕರ ಗೌರವಧನ ಹಾಗೂ ಹೊರಗುತ್ತಿಗೆ ಸಿಬ್ಬಂದಿಗಳ ವೇತನ ಪಾವತಿಸಲು ಒಟ್ಟು ರೂ.2212.58 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.<br><br>2025-26ನೇ ಸಾಲಿನಲ್ಲಿ ಶಾಲಾ ಕಾಲೇಜುಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ ಅಲ್ಪಸಂಖ್ಯಾತರಿಗಾಗಿ ವಸತಿ ಶಾಲೆ/ ವಸತಿ ನಿಲಯ ನಿರ್ಮಾಣ ಯೋಜನೆಗಳಡಿ ರೂ.750.00 ಕೋಟಿಗಳ ಅನುದಾನ ಮತ್ತು ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಯೋಜನೆಯಡಿ ರೂ.100.00 ಕೋಟಿಗಳು ಸೇರಿ ಒಟ್ಟು ರೂ.850.00 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ. |

**ಸಂಖ್ಯೆ:MWD 38 LMQ 2026**

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು